**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ</u>**

**<u>ಆಳಂದ</u>**

<u>ಸಿ.ಸಿ. ನಂಬರ 3639/2023</u> ಸಿ.ಡಬ್ಲ್ಯೂ.**2** ಪಿ.ಡಬ್ಲ್ಯೂ.**9**

| | |
|---|---|
| ಹೆಸರು | ದತ್ತತ್ರೇಯಾ |
| ತಂದೆ/ಗಂಡ | ಮಲ್ಲೇಶಪ್ಪಾ |
| ವಯಸ್ಸು | 50 ವರ್ಷ |
| ಉದ್ಯೋಗ | ಖಾಸಗಿ ಕೆಲಸ |
| ವಾಸಸ್ಥಳ | ಖಜೂರಿ ಗ್ರಾಮ |

ದಿನಾಂಕ 06-03-2026

ಸತ್ಯ ಪ್ರತಿಜ್ಞೆಯ ಮೇರೆಗೆ

**<u>ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:</u>**

ಆರೋಪಿಯ ಪರಿಚಯ ಇರುತ್ತದೆ. ಚಾಸಾ-1 ರಿಂದ 3 ಮತ್ತು 9ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಒಂದು ದಾಖಲೆಯ ಮೇಲೆ ಸಹಿ ಮಾಡು ಅಂತಾ ಹೇಳಿದ ಕಾರಣ ನಾನು ಸಹಿಯನ್ನು ಮಾಡಿರುತ್ತೇನೆ. ಸಾಕ್ಷಿಯು ನಿಪಿ-2ರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 2 (ಎ), ಅಂತಾ ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು. )**

<u>ಪಾಟೀ ಸವಾಲುಃ ಮಾನ್ಯ ಸ ಸ ಅ ವಕೀಲರಿಂದ:</u>

ದಿಃ 10-09-2022 ರಂದು 03.30 ರಿಂದ 04.30 ಗಂಟೆಯವರೆಗೆ, ನನ್ನ ಹಾಗೂ ಚಾಸ-3 ರವರ ಸಮಕ್ಷಮ ಪಂಚನಾಮೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ. 2 ರಲ್ಲಿ ಇರುವ ಮಾಹಿತಿ ಗೊತ್ತಿದ್ದರೂ ಸಹಿತ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರಃ ವಕೀಲರಿಂದ:</u>

ಪಾಟೀ ಸವಾಲು ಇಲ್ಲ.

<u>ಮರು ವಿಚಾರಣೆ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ